ರಕ್ಷಕ್ ವಾಹನದ ಬದಲಿಗೆ ಕೆಎ–07–ಜಿ–158 ಕಮಾಂಡರ್ ಜೀಪ್‌ನ್ನು ಒದಗಿಸಲಾಗಿದೆ.

(ಆ) ಅನ್ವಯಿಸುವುದಿಲ್ಲ.

(ಇ) ಇಲ್ಲ.

(ಈ) ಚಿಂತಾಮಣಿ ನಗರದಲ್ಲಿ ಸಂಚಾರ ಪೊಲೀಸ್ ಠಾಣೆಯನ್ನು ತೆರೆಯುವ ಕುರಿತು ಇಲಾಖಾ ಹಂತದಲ್ಲಿ ಪರಿಶೀಲನೆಯಲ್ಲಿದ್ದು, ಅವಶ್ಯಕತೆ ಕಂಡು ಬಂದಲ್ಲಿ ಕ್ರಮ ಕೈಗೊಳ್ಳಲಾಗುವುದು.

ಖಾಲಿ ಇರುವ ಹುದ್ದೆಗಳನ್ನು ಮಂಜೂರು ಮಾಡುವುದು

1173 (1182); ಶ್ರೀ ಕೃಷ್ಣಾರೆಡ್ಡಿ ಎಂ.

ಅ) ಚಿಂತಾಮಣಿ ತಾಲ್ಲೂಕಿನ ಎಲ್ಲಾ ಇಲಾಖೆಗಳಿಗೆ ಮಂಜೂರಾಗಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು (ವೃಂದವಾರು ವಿವರ ನೀಡುವುದು);

ಆ) ಈ ಇಲಾಖೆಗಳಲ್ಲಿ ಖಾಲಿ ಇರುವ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗಗಳ ಸಂಖ್ಯೆ ಎಷ್ಟು (ವೃಂದವಾರು ವಿವರ ನೀಡುವುದು);

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಈ) ರಾಜ್ಯದ ಎಲ್ಲಾ ಇಲಾಖೆಗಳಿಗೆ ಮಂಜೂರಾಗಿರುವ ಹುದ್ದೆಗಳು ರಾಜ್ಯದ ಜನಸಂಖ್ಯೆಗನುಗುಣವಾಗಿ ಇವೆಯೇ;

ಉ) ಹಾಗಿದ್ದಲ್ಲಿ, ರಾಜ್ಯದ ಜನಸಂಖ್ಯೆಗನುಗುಣವಾಗಿ ಖಾಲಿ ಇರುವ ಹುದ್ದೆಗಳು ಹಾಗೂ ಮಂಜೂರು ಮಾಡಬೇಕಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು)?

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ)

ಅ) ಚಿಂತಾಮಣಿ ತಾಲ್ಲೂಕಿಗೆ ಸಂಬಂಧಿಸಿದಂತೆ ಒಟ್ಟು 2816 ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳು ಮಂಜೂರಾಗಿರುತ್ತವೆ. (ಅಧಿಕಾರಿ/ಸಿಬ್ಬಂದಿಗಳ ಇಲಾಖಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.)

ಆ) ಚಿಂತಾಮಣಿ ತಾಲ್ಲೂಕಿಗೆ ಸಂಬಂಧಿಸಿದಂತೆ ಒಟ್ಟು 753 ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳು ಖಾಲಿ ಇರುತ್ತವೆ. (ಅಧಿಕಾರಿ/ಸಿಬ್ಬಂದಿಗಳ ಇಲಾಖಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.)

ಇ) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 6 ರಾಕಾವ್ಯ 2012 (ಭಾಗ) ದಿನಾಂಕ: 23.02.2013ರಲ್ಲಿ ಅನುಚ್ಛೇದ 371 (ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯ ಮಟ್ಟದ ವೃಂದ ಮತ್ತು ಸ್ಥಳೀಯ ವೃಂದಗಳಲ್ಲಿ ಹುದ್ದೆಗಳನ್ನು ಗುರುತಿಸಿ ಮೀಸಲಾತಿ ನಿಗದಿಪಡಿಸುವವರೆಗೂ ಎಲ್ಲಾ ಇಲಾಖೆಗಳಲ್ಲಿ ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿತ್ತು. ಅನುಚ್ಛೇದ 371 (ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸ್ಥಳೀಯ ವೃಂದವನ್ನು ರಚಿಸಿರುವ ಇಲಾಖೆಗಳು ದಿನಾಂಕ: 07.02.2014ರ ತಿದ್ದುಪಡಿ ಆದೇಶದಂತೆ ಹುದ್ದೆಗಳನ್ನು ತುಂಬುವ ಪ್ರಕ್ರಿಯೆ ಪ್ರಾರಂಭಿಸಬಹುದೆಂದು ತಿಳಿಸಿ ನಿರ್ಬಂಧವನ್ನು ಸಡಿಲಿಸಲಾಗಿದೆ.

ಖಾಲಿ ಹುದ್ದೆಗಳನ್ನು ತುಂಬಲು ಇಲಾಖಾ ಮುಖ್ಯಸ್ಥರುಗಳು ಸಚಿವಾಲಯದ ಆಡಳಿತ ಇಲಾಖೆಗಳಿಗೆ ಪ್ರಸ್ತಾವನೆ ಸಲ್ಲಿಸಿ, ಆಡಳಿತ ಇಲಾಖೆಗಳು ಆರ್ಥಿಕ ಇಲಾಖೆಯ ಸಹಮತಿ ಪಡೆದು ಖಾಲಿ ಹುದ್ದೆಗಳನ್ನು ತುಂಬಬೇಕಾಗುತ್ತದೆ. ಆದರೆ, ಅನುಚ್ಛೇದ 371 (ಜೆ) ರಡಿ ಸ್ಥಳೀಯ ವೃಂದದ ಖಾಲಿ ಹುದ್ದೆಗಳನ್ನು ತುಂಬಲು ಆರ್ಥಿಕ

ಇಲಾಖೆಯು ಸಹಮತಿ ನೀಡಿದೆ ಎಂದು ಭಾವಿಸಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ.

ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ಪಡೆದ ನಂತರ ಇಲಾಖೆಗಳು ಆ ಖಾಲಿ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗ ಹಾಗೂ ಇತರೆ ಆಯ್ಕೆ ಪ್ರಾಧಿಕಾರಗಳಿಗೆ ಬಿಡುಗಡೆ ಮಾಡುತ್ತಿವೆ.

ಆಯಕಟ್ಟಿನ ಹುದ್ದೆಗಳಲ್ಲಿ ಆಡಳಿತಾತ್ಮಕ ತೊಂದರೆಗಳ ನಿವಾರಣೆಗಾಗಿ ಪ್ರಭಾರಿ ವ್ಯವಸ್ಥೆಗಳನ್ನು ಮಾಡಿ ಕೆಲಸ ಕುಂಠಿತವಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಮತ್ತು ಉ) ಹುದ್ದೆಗಳನ್ನು ಜನಸಂಖ್ಯೆಗನುಗುಣವಾಗಿ ಸೃಜಿಸುವುದಿಲ್ಲ. ಖಾಲಿಯಿರುವ ಹುದ್ದೆಗಳನ್ನು ಮೇಲಿನ ಪ್ರಶ್ನೆ (ಇ) ಗೆ ಉತ್ತರದಲ್ಲಿ ತಿಳಿಸಿರುವಂತೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಅನುಬಂಧ

ಬೆಂತಾಮಣಿ ತಾಲ್ಲೂಕಿನ ವಿವಿಧ ಇಲಾಖೆಗಳಲ್ಲಿ ಮಂಜೂರು ಆಗಿರುವ ಹಾಗೂ ಖಾಲಿ ಇರುವ ಅಧಿಕಾರಿ/ಸಿಬ್ಬಂದಿಗಳ ವಿವರಗಳು

ಕ್ರ. ಸಂ.	ಇಲಾಖೆಯ ಹೆಸರು	ಮಂಜೂರಾಗಿರುವ ಹುದ್ದೆಗಳು (ಎಲ್ಲಾ ವೃಂದಗಳನ್ನು ಒಳಗೊಂಡಂತೆ)	ಖಾಲಿ ಇರುವ ಹುದ್ದೆಗಳು (ಎಲ್ಲಾ ವೃಂದಗಳನ್ನು ಒಳಗೊಂಡಂತೆ)
1	ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂತಾಮಣಿ.	12	1
2	ಸಾರಾಸಕ್ಕೆ, ಬೆಂತಾಮಣಿ.	236	122
3	ತಮೇಲ್ಹಾಳ್, ಬೆಂತಾಮಣಿ.	154	34
4	ರೆವಿನ್ಯೂ ಇಲಾಖೆ, ಬೆಂತಾಮಣಿ.	45	17
5.	ಹಿರಿಯ ಸಹಾಯಕ ಕಮೀಷನರ್ ಇಲಾಖೆ, ಬೆಂತಾಮಣಿ	15	6
6	ಆಹಾರ ಇಲಾಖೆ, ಬೆಂತಾಮಣಿ.	302	151
7	ಮಾನ್ಯಶ್ರೀ ರಾಜ್ ಉಚಕಲ್ಲಿಪಾಗ, ಬೆಂತಾಮಣಿ	3	1
8	ಗ್ರಾಮೀಣ ಮತ್ತು ಸಿರು ಮತ್ತು ನೈರ್ಮಲ್ಯ	8	1

9	ತಾಲ್ಲೂಕು ಮಟ್ಟದ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂತಾಮಣಿ	45	33
10	ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಬೆಂತಾಮಣಿ.	65	58
11	ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ, ಬೆಂತಾಮಣಿ.	36	32
12	ಜಿಲ್ಲೂಕು ಪಟಾಯಿತಿ, ಬೆಂತಾಮಣಿ	126	57
13	ಅಕ್ಷರ ದಾಸೋಹ	2	1
14	ಪಶು ಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ ಬೆಂತಾಮಣಿ	92	34
15	ಕೃಷಿ ಇಲಾಖೆ, ಬೆಂತಾಮಣಿ	32	17
16	ಎಪಿಎಂಸಿ, ಬೆಂತಾಮಣಿ.	8	4
17	ಗ್ರಂಥಾಲಯ, ಬೆಂತಾಮಣಿ	5	6
18	ಶಿಕ್ಷಣ ಇಲಾಖೆ ಬೆಂತಾಮಣಿ	1188	165
	ಒಟ್ಟು	2815	1111